ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಸನ್ಮಾನ್ಯ ಮುಖ್ಯಮಂತ್ರಿಗಳು

ಪತ್ರಿಕೆಯ ಹೆಸರು : NAME OF THE NEWS PAPER : ವಿಶ್ವವಾಣಿ

ದಿನಾಂಕ : DATE : 11/07/2019

# ಅಧಿವೇಶನಕ್ಕೂ ಮುನ್ನ ಕುಮಾರಸ್ವಾಮಿ ರಾಜೀನಾಮೆ?

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಅಧಿವೇಶನ-ಆರಂಭಕ್ಕೂ ಮುನ್ನವೇ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಲು ಎಚ್.ಡಿ. ಕುಮಾರಸ್ವಾಮಿ ನಿರ್ಧರಿಸಿದ್ದಾರೆ ಎಂದು ತಿಳಿದುಬಂದಿದೆ.

ಸಚಿವ ಡಿ.ಕೆ.ಶಿವಕುಮಾರ್ ಮುಂಬೈಯಲ್ಲಿ ರೆಬೆಲ್ ಶಾಸಕರ ಭೇಟಿ ವಿಫಲ ಹಾಗೂ ಕಾಂಗ್ರೆಸ್ ಶಾಸಕರಾದ ಎಂಟಿಬಿ ನಾಗರಾಜ್ ಮತ್ತು ಡಾ. ಸುಧಾಕರ್ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡುತ್ತಿದ್ದಂತೆ ಸಿಎಂ ಎಚ್.ಡಿ.ಕುಮಾರಸ್ವಾಮಿ ತಮ್ಮ ಬೆಂಗಾವಲು ವಾಹನ ಬಿಟ್ಟು ಅಜ್ಞಾತ ಸ್ಥಳಕ್ಕೆ ತೆರಳಿ ಮೂರು ಗಂಟೆಗೂ ಅಧಿಕ ಸಮಯ ಮೌನಕ್ಕೆ ಶರಣಾಗಿದ್ದರು. ಬಳಿಕ ಪದ್ಮನಾಭ ನಗರದಲ್ಲಿರುವ ನಿವಾಸದಲ್ಲಿ ಜೆಡಿಎಸ್ ರಾಷ್ಟ್ರೀಯ ಅಧ್ಯಕ್ಷ ಎಚ್.ಡಿ.ದೇವೇಗೌಡರನ್ನು ಭೇಟಿ ಮಾಡಿ ರಾಜ್ಯದ ರಾಜಕೀಯ ವಿದ್ಯಮಾನಗಳ ಕುರಿತು ಗಂಭೀರ ಚರ್ಚೆ ನಡೆಸಿದರು.

## ಕಡತ ವಿಲೇವಾರಿಯಲ್ಲಿ ಬ್ಯುಸಿಯಾದ ರೇವಣ್ಣ



ಮೈತ್ರಿ ಪಕ್ಷಗಳ ಶಾಸಕರ ರಾಜೀನಾಮೆಯಿಂದ ಮೈತ್ರ ಸರಕಾರಕ್ಕೆ ಅಭದ್ರತೆ ಕಾಡಿದೆ. ಇತ್ತ ಅಧಿಕಾರ ಉಳಿಸಿಕೊಳ್ಳಲು ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಇನ್ನಿಲ್ಲದ ಕಸರತ್ತು ನಡೆಸುತ್ತಿದ್ದಾರೆ. ಇದ್ಯಾವುದು ನನಗೆ ಸಂಬಂಧಿಸಿದ್ದ ಅಲ್ಲ ಎಂಬಂತೆ ಅವರ ಸಹೋದರ ಲೋಕೋಪಯೋಗಿ ಸಚಿವ ಎಚ್.ಡಿ.ರೇವಣ್ಣ ಅವರು ಕಡತ ವಿಲೇವಾರಿಯಲ್ಲಿ ತಲ್ಲೀನರಾಗಿದ್ದರು.ಸರಕಾರದ ಅಸ್ತಿತ್ವದ ಬಗ್ಗೆ ಹೆಚ್ಚು ತಲೆ ಕೆಡಿಸಿಕೊಳ್ಳದ ಸಚಿವರು, ಎಂಜಿನಿಯರುಗಳ ವರ್ಗಾವಣೆಯಲ್ಲಿ ಮಗ್ನರಾಗಿದ್ದರು. ತಮ್ಮ ಇಲಾಖೆಯ ಎಂಜಿನಿಯರುಗಳಿಗೆ ಬಡ್ತಿ ನೀಡುವುದು ಹಾಗೂ ವರ್ಗಾವಣೆಗೆ ಆದೇಶ ನೀಡುವಲ್ಲಿ ನಿರತರಾಗಿದ್ದರು.

ಈ ವೇಳೆ ಗುರುವಾರ ಸಂಜೆಯೊಳಗೆ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡುವ ಕುರಿತು ನಿರ್ಧಾರ ಪ್ರಕಟಿಸುವುದಾಗಿ ಹೇಳಿದ್ದಾರೆ ಎನ್ನಲಾಗುತ್ತಿದೆ. ಸರಕಾರ ರಚಿಸಲು ಕಾಂಗ್ರೆಸ್ ಮುಂದಾದರೆ, ಜೆಡಿಎಸ್ ಬೆಂಬಲ ನೀಡಲಿದೆ. ಇಲ್ಲವಾದರೆ ಮಧ್ಯಂತರ ಚುನಾವಣೆ ಎದುರಿಸಲು ಪಕ್ಷವನ್ನು ಸನ್ನದ್ಧಗೊಳಿಸಲು ಅಣಿ ಆಗುತ್ತೇನೆ ಎಂದು ವರಿಷ್ಠರ ಮುಂದೆ ಕುಮಾರಸ್ವಾಮಿ ಹೇಳಿಕೊಂಡಿದ್ದಾರೆ. ಈ ವೇಳೆ ದೇವೇಗೌಡರು ಮೌನಕ್ಕೆ ಶರಣಾಗಿದ್ದರು ಎಂದು ತಿಳಿದು ಬಂದಿದೆ.